ಕರ್ನಾಟಕ ಸರ್ಕಾರ
ಮೀನುಗಾರಿಕೆ ನಿರ್ದೇಶನಾಲಯ
3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001
ದೂ : 080 - 2286 4681/4604 ಫ್ಯಾಕ್ಸ್ : 080 - 2286 4619 ಇಮೇಲ್ : dof-blr-ka@nic.in

ಸಂಖ್ಯೆ: DOF-TECHOALL(2)/01/2021, E-407850. ದಿನಾಂಕ: 08 /10/2021

ಸುತ್ತೋಲೆ

ವಿಷಯ: ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ಮೀನು ಪಾಶುವಾರು ಹಕ್ಕನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಕ್ರಮವಹಿಸುವ ಕುರಿತು.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿಗಳು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರುರವರ ಟಿಪ್ಪಣಿ ದಿನಾಂಕ: 21/0/2021.

*********

ಕರ್ನಾಟಕ ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಡಿ ಸುಮಾರು 23737 ಕೆರೆಗಳಿದ್ದು, 1.25ಲಕ್ಷ ಹೆಕ್ಟೇರ್ ಜಲ ವಿಸ್ತೀರ್ಣವಿದ್ದು, ಮೀನು ಕೃಷಿಕೈಗೊಳ್ಳಲು ವಿಪುಲ ಅವಕಾಶವಿರುತ್ತದೆ. ಆದರೆ ಸದರಿ ಕೆರೆಗಳ ಮೀನು ಪಾಶುವಾರು ಹಕ್ಕನ್ನು ಸಮರ್ಪಕವಾಗಿ ವಿಲೇವಾರಿ ಮಾಡದಿರುವುದರಿಂದ ಹಾಗೂ ವೈಜ್ಞಾನಿಕವಾಗಿ ಮೀನು ಕೃಷಿ ಕೈಗೊಳ್ಳದಿರುವುದರಿಂದ 1 ಮಿಲಿಯನ್ ಮೆಟ್ರಿಕ್ ಟನ್ ಮೀನು ಉತ್ಪತ್ತಿ ಮಾಡಲು ಕಷ್ಟವಾಗುತ್ತಿದೆ. ಆದುದರಿಂದ, ಜಿಲ್ಲಾ ಮಟ್ಟದ ಅಧಿಕಾರಿಗಳು ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ರವರನ್ನು ಭೇಟಿ ಮಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲು ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕೋರಲು ಸೂಚಿಸಿದೆ. ಅಲ್ಲದೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿಗೆ ಕ್ರಮವಹಿಸಲು ಸೂಚಿಸಿದೆ ಹಾಗೂ ವೈಜ್ಞಾನಿಕವಾಗಿ ಮೀನು ಕೃಷಿ ಕೈಗೊಳ್ಳಲು ತಾಂತ್ರಿಕ ಸಲಹೆ ನೀಡಲು ಸಹ ಸೂಚಿಸಿದೆ.

ತುಮಕೂರು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹೊರಡಿಸಿರುವ ಪತ್ರವನ್ನು ಮಾಹಿತಿಗಾಗಿ ಲಗತ್ತಿಸಿದೆ.

ಮೀನುಗಾರಿಕೆ ನಿರ್ದೇಶಕರು
08/10/21

ಗೆ:
ಎಲ್ಲಾ ವಲಯ ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ.
ಪ್ರತಿ: ಎಲ್ಲಾ ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ
ಪ್ರತಿ: ಎಲ್ಲಾ ತಾಲ್ಲೂಕು ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ

ಡಾ. ವಿದ್ಯಾಕುಮಾರಿ ಕೆ., ಭಾ.ಆ.ಸೇ.
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಜಿಲ್ಲಾ ಪಂಚಾಯತ್, ತುಮಕೂರು-572 102.
ಕಛೇರಿ : 0816-2272898
ಫ್ಯಾಕ್ಸ್ : 0816-2274161
ನಿವಾಸ : 0816-2272897

Dr. Vidyakumari K., I.A.S.,
Chief Executive Officer
Zilla Panchayath, Tumakuru-572 102.
Mob : 94808 77000
e-mail : ceo_zp_tmk@nic.in
Website : www.tumkurzillapanchayat.gov.in

ಸಂಖ್ಯೆ:ಹಗುಪ/30/2021-22 ದಿನಾಂಕ:05-10-2021

ಗೆ,
1) ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು

ಮಾನ್ಯರೇ,

ವಿಷಯ :- ದಿನಾಂಕ:04-10-2021 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ನಡೆಸಿರುವ ವೀಡಿಯೋ ಸಂವಾದದಲ್ಲಿ ಚರ್ಚಿಸಿರುವಂತೆ ಕೆರೆಗಳ ವಿಲೇವಾರಿಗೆ ಸಂಬಂಧಿಸಿದ ಮಾಹಿತಿಗಳನ್ನು ಸಲ್ಲಿಸುವ ಬಗ್ಗೆ.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:04-10-2021 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ರವರು ಸಹ ಭಾಗವಹಿಸಿ ರಾಜ್ಯದ ಮೀನು ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲು ಮೀನುಗಾರಿಕೆ ಇಲಾಖೆಯು ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಜಲಸಂಪನ್ಮೂಲಗಳನ್ನು ಮೀನುಗಾರಿಕೆಗೆ ಅಳವಡಿಸಲು ಕ್ರಮ ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಆದರಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಪ್ರತಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಕಳುಹಿಸುವಂತೆ ತಿಳಿಸಿರುತ್ತಾರೆ.

ಆದುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನು ಮರಿ ಬಿತ್ತನೆ, ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಹಾಗೂ ಮೀನುಗಾರರಿಗೆ ಸಂಬಂಧಿಸಿದ ಮಾಹಿತಿಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಸಂಬಂಧಿಸಿದ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಮತ್ತು ಜಿಲ್ಲಾ ಮೀನುಗಾರಿಕೆ ಉಪ ನಿರ್ದೇಶಕರ ಕಛೇರಿಗೆ ಕಳುಹಿಸುವಂತೆ ತಿಳಿಸಿದೆ.

ಅಲ್ಲದೆ ಮೀನುಗಾರಿಕೆ ಸಹಾಯವಾಣಿ ಸಂಖ್ಯೆ:8277200300 ಗೆ ಕರೆ ಮಾಡಿ ಮೀನುಗಾರಿಕೆಗೆ ಸಂಬಂಧಿಸಿದಂತೆ ಅಗತ್ಯ ಮಾಹಿತಿ ಪಡೆದುಕೊಳ್ಳುವಂತೆ ಮೀನುಗಾರರಿಗೆ/ಮೀನುಕೃಷಿಕರಿಗೆ ಸೂಕ್ತ ತಿಳುವಳಿಕೆ ನೀಡುವಂತೆಯೂ ತಿಳಿಸಿದೆ.

ತಮ್ಮ ವಿಶ್ವಾಸಿ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್, ತುಮಕೂರು.